**ಕರ್ನಾಟಕ ಸರ್ಕಾರ**
**ಪಂಚಾಯತ್ ರಾಜ್ ಆಯುಕ್ತಾಲಯ**
**ಕಾಳಿದಾಸ ಮಾರ್ಗ, ಕೆ.ಜಿ.ರಸ್ತೆ, ಬೆಂಗಳೂರು – 560 009.**

ಸಂಖ್ಯೆ: ಕಪಂರಾಆ/ಅಭಿವೃದ್ಧಿ/117/2023 ದಿನಾಂಕ:06.03.2023

**ಸುತ್ತೋಲೆ**

**ವಿಷಯ:-** ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಪ್ರತಿ ದಿನ ಮಧ್ಯಾಹ್ನ 3.30 ರಿಂದ 4.30 ಗಂಟೆ ವರೆಗೆ ಮಹಿಳೆಯರಿಗಾಗಿ ಮೀಸಲಿರಿಸುವ ಕುರಿತು.

**ಉಲ್ಲೇಖ:.** ಸರ್ಕಾರದ ಆದೇಶ ಸಂಖ್ಯೆ:KPRC-DEV/544/2021,ದಿನಾಂಕ: 19.12.2022.

****

ಸರ್ಕಾರದ ಆದೇಶದನ್ವಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ 5,633 ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ನಿರ್ವಹಣೆಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯಿತಿಗಳಿಗೆ ದಿನಾಂಕ:01.03.2019 ರಿಂದ ಜಾರಿಗೆ ಬರುವಂತೆ ವರ್ಗಾಯಿಸಲಾಗಿರುತ್ತದೆ.

ರಾಜ್ಯದಲ್ಲಿ ಪ್ರಸ್ತುತ 5953 ಗ್ರಾಮ ಪಂಚಾಯಿತಿಗಳಿದ್ದು, 5573 ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಸರ್ಕಾರದ ಉಲ್ಲೇಖಿತ ಆದೇಶದಲ್ಲಿ 330 ಹೊಸ ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡಿರುತ್ತದೆ.

ಗ್ರಾಮ ಪಂಚಾಯತಿ ಗ್ರಂಥಾಲಯಗಳಲ್ಲಿ **"ಓದುವ ಬೆಳಕು"** ಕಾರ್ಯಕ್ರಮದ ಅಡಿಯಲ್ಲಿ **"ಗ್ರಾಮ ಚದುರಂಗ ಆಟ ಆಡೋಣ ಅಭಿಯಾನ", "ಗಟ್ಟಿ ಓದು ಅಭಿಯಾನ", "ಅಮ್ಮನಿಗೊಂದು ಪುಸ್ತಕ ಅಭಿಯಾನ" "ಪತ್ರ ಬರೆಯುವ ಅಭಿಯಾನ"** ಮತ್ತು **"ಗ್ರಂಥಾಲಯದೆಡೆಗೆ ನಾನು ನನ್ನ ಸ್ನೇಹಿತರು" ಅಭಿಯಾನವನ್ನು** ಗ್ರಾಮೀಣ ಪ್ರದೇಶದ ಎಲ್ಲಾ ಮಕ್ಕಳು, ಮಹಿಳೆಯರು, ಹದಿಹರೆಯದವರು, ಯುವ ವಯಸ್ಕರು, ವಯಸ್ಕರು , ಹಿರಿಯ ನಾಗರೀಕರು, ರೈತರು ಹಾಗೂ ಇನ್ನಿತರೆ ಸಮುದಾಯ ವರ್ಗದವರಿಗೆ ಸರ್ವತೋಮುಖ ಬೆಳವಣಿಗೆಯಲ್ಲಿ ಸಹಕಾರಿಯಗುವುದೆಂದು ಗ್ರಂಥಾಲಯಗಳ ಉಪಯೋಗಗಳನ್ನು ಪಡೆಯಲು ಅವಕಾಶವನ್ನು ಕಲ್ಪಿಸಲು ಸುತ್ತೋಲೆಗಳಲ್ಲಿ ತಿಳಿಸಿ, ಕ್ರಮ ವಹಿಸಲಾಗಿರುತ್ತದೆ.

"ಹೆಣ್ಣೊಂದು ಕಲಿತರೆ, ಶಾಲೆಯೊಂದು ತೆರೆದಂತೆ" ಎಂಬ ನಾಣ್ನುಡಿಯಂತೆ ಮಹಿಳೆಯರಲ್ಲಿ ಕಲಿಕೆ ಹಾಗೂ ಶೈಕ್ಷಣಿಕ ಗುಣಮಟ್ಟ ಹೆಚ್ಚಿದಂತೆ ಸಮಾಜದಲ್ಲಿ ಮಹಿಳೆಯರಿಗೆ ಹೆಚ್ಚಿನ ಸ್ಥಾನಮಾನ ಸಿಗಲಿದೆ ಹಾಗೂ ಸಮಾಜದ ಈ ನಿಟ್ಟಿನಲ್ಲಿ ಅಭಿವೃದ್ಧಿ ಹೊಂದುತ್ತದೆ. ಗ್ರಾಮ ಪಂಚಾಯತಿ ಗ್ರಂಥಾಲಯಗಳಲ್ಲಿ ಮಹಿಳೆಯರ ಓದಿಗಾಗಿ ಹೆಚ್ಚಿನ ಆದ್ಯತೆ ನೀಡುವ ಉದ್ದೇಶದಿಂದ ಪ್ರತಿದಿನ ಗ್ರಂಥಾಲಯಗಳಲ್ಲಿ ಮಧ್ಯಾಹ್ನ 3:30 ರಿಂದ 4:30 ರವರೆಗೆ 1 ಗಂಟೆ ಕಾಲ ಮಹಿಳೆಯರಿಗೆ ಮೀಸಲಿರಿಸಿದ ಸಮಯವನ್ನು ಮಹಿಳೆಯರ ಓದು, ಚರ್ಚೆಗಳ ಹಾಗೂ ಇತರೆ ಚಟುವಟಿಕೆಗಳಿಂದ ಮಹಿಳೆಯರ ಸಮಗ್ರ ಅಭಿವೃದ್ಧಿಗಾಗಿ ಈ ಕೆಳಗಿನಂತೆ ಕಾರ್ಯಕ್ರಮವನ್ನು ರೂಪಿಸುವುದು.

- **"ನನ್ನ ಮಗು ಪೌಷ್ಠಿಕ ಮಗು", "ನಾನು ನನ್ನ ಆರೋಗ್ಯ"** ಹಾಗೂ ಇತರೇ ವಿಷಯಗಳ ಪರಿಕಲ್ಪನೆಯ ಕುರಿತು ಗ್ರಂಥಾಲಯಗಳಲ್ಲಿ ವಿಚಾರ ವಿನಿಮಯ ನಡೆಸುವುದು. ಪ್ರತಿ ತಿಂಗಳ ಮೊದಲನೇ ಮತ್ತು ಮೂರನೇ ಶನಿವಾರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ Youtube ಚಾಲನ್‌ನಲ್ಲಿ ಪ್ರಸಾರವಾಗುವ ಮಹಿಳೆಯರ ಆರೋಗ್ಯದ ಸಮಸ್ಯೆಗಳ ವಿಷಯಗಳ

ಕುರಿತು ಗ್ರಂಥಾಲಯ ಮೇಲ್ವಿಚಾರಕರುಗಳು ಗ್ರಂಥಾಲಯಕ್ಕೆ ಆಗಮಿಸುವ ಮಹಿಳೆಯರಿಗೆ ಪ್ರದರ್ಶಿಸಲು ಕ್ರಮವಹಿಸುವುದು.

- ಗ್ರಂಥಾಲಯದಲ್ಲಿ **"ನನ್ನ ಕನಸಿನ ಊರು"** ಎಂಬ ವಿಷಯಕ್ಕೆ ಸಂಬಂಧಿಸಿದಂತೆ, ವಿವಿಧ ರೀತಿಯ ಚಿತ್ರಕಲೆ, ಪ್ರಬಂಧ, ರಂಗೋಲಿ, ಹಾಡು ಹೇಳುವುದು ಮತ್ತು ಇತರೇ ಚಟುವಟಿಕೆಗಳಲ್ಲಿ ಮಹಿಳೆಯರು ಭಾಗವಹಿಸುವಂತೆ ಕ್ರಮವಹಿಸುವುದು.

- ಸ್ಥಳೀಯ ಮಟ್ಟದಲ್ಲಿ ಮಹಿಳೆಯರು ಪ್ರತಿ 06 ತಿಂಗಳಿಗೊಮ್ಮೆ ಪಾಲ್ಗೊಳ್ಳುವಂತಹ ಕ್ರೀಡಾ ಚಟುವಟಿಕೆಗಳಲ್ಲಿ ವಿಶೇಷವಾಗಿ (ಒಳಾಂಗಣ ಕ್ರೀಡೆಗಳಾದ ಚೆಸ್, ಕೇರಂ, ಟೇಬಲ್ ಟೆನ್ನಿಸ್, ಚೌಕಬಾರ, ಅಳುಗುಳಿಮನೆ ಇನ್ನು ಮುಂತಾದವುಗಳನ್ನು ಆಯೋಜಿಸಿಸುವುದು) ಸ್ಪರ್ಧೆಗಳಲ್ಲಿ ಮಹಿಳೆಯರು ಪಾಲ್ಗೊಳ್ಳುವಂತೆ ಪ್ರೋತ್ಸಾಹಿಸುವುದು.

- ಗ್ರಾಮ ಪಂಚಾಯತಿ ಗ್ರಂಥಾಲಯಗಳಲ್ಲಿ ಡಿಜಿಟಲ್ ಲೈಬ್ರರಿ ಜಾಲತಾಣ (www.karnatakadigitalpubliclibrary.org)ದಲ್ಲಿ ಇಂದೀಕರಿಸಲಾದ ಮಹಿಳಾ ಸಬಲೀಕರಣಕ್ಕೆ ಸಂಬಂಧಿಸಿದ ಚಲನಚಿತ್ರಗಳನ್ನು ಪ್ರದರ್ಶಿಸಲು ಕ್ರಮವಹಿಸುವುದು.

- ಗ್ರಾಮ ಪಂಚಾಯತಿ ಗ್ರಂಥಾಲಯಗಳಲ್ಲಿ ಮಹಿಳೆಯರಿಗಾಗಿ ತಿಂಗಳಿಗೊಮ್ಮೆ ಸಾಂಸ್ಕೃತಿಕ ಚಟುವಟಿಕೆಗಳನ್ನು ಆಯೋಜಿಸುವುದು, ಪ್ರತಿ ವಾರದಲ್ಲಿ ಒಂದು ದಿನ ಕಾರ್ಯಾಗಾರವನ್ನು ಆಯೋಜಿಸಿ ಇದಕ್ಕಾಗಿ ಸಹಭಾಗಿಗಳಾಗಿ ಮಹಿಳಾ ಸಮಾಖ್ಯ, India Literacy Project, Hunger Project, Azim Premji Foundation, ANODE e-Governance Foundation, Foundation for Ecological Society ಸಂಸ್ಥೆಗಳನ್ನು ಆಹ್ವಾನಿಸಿ ಕಾರ್ಯಗಾರದಲ್ಲಿ ಭಾಗವಹಿಸಲು ಮತ್ತು ಮಾಹಿತಿಯನ್ನು ಒದಗಿಸಲು ಕ್ರಮಕೈಗೊಳ್ಳುವುದು.

ಆಯುಕ್ತರು
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
ಬೆಂಗಳೂರು.

**ಇವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ(ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
3. ರಾಜ್ಯದ ಎಲ್ಲಾ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ(ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
4. ರಾಜ್ಯದ ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ(ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮುಖಾಂತರ)
5. ಮಾಹಿತಿ ಕೇಂದ್ರ/ವೆಬ್‌ಸೈಟ್, ಗ್ರಾಅಪ ಇಲಾಖೆ.

**ಪ್ರತಿಯನ್ನು:**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.-560 001
2) ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು. ಇವರ ಆಪ್ತ ಸಹಾಯಕರಿಗೆ.
3) ಕಛೇರಿ ಪ್ರತಿ.